# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-58522/23-24

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 06-03-2024

## ಕಛೇರಿ ಆದೇಶ

ವಿಷಯ: ಶ್ರೀ ಪ್ರಕಾಶ್ ಎನ್. ಎಸ್, ಸಹಾಯಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಬನಶಂಕರಿ) ಉಪ ವಿಭಾಗ ರವರ ವರದಿ ದಿನಾಂಕ: 25-01-2024
2) ಮುಖ್ಯ ಅಭಿಯಂತರರು (ದಕ್ಷಿಣ) ರವರ ವರದಿ ದಿನಾಂಕ: 02-02-2024
3) ಸಂಖ್ಯೆ: ಬಿ12(6)ಪಿಆರ್/56/23-24, ದಿನಾಂಕ: 05-07-2023ರ ಸುತ್ತೋಲೆ

-----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಪ್ರಕಾಶ್ ಎನ್. ಎಸ್, ಸಹಾಯಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವಾರ್ಡ್-166 (ಹೊಸ ವಾರ್ಡ್-190), ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಬನಶಂಕರಿ) ಉಪ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರು ಅನಧಿಕೃತ ಗೈರುಹಾಜರಿಯಾಗುತ್ತಿರುವುದಾಗಿ ಹಾಗೂ ಸದರಿ ಅಭಿಯಂತರರು ಸಮರ್ಪಕವಾಗಿ ಕರ್ತವ್ಯ ನಿರ್ವಹಿಸುತ್ತಿಲ್ಲದೆ ಇರುವುದಾಗಿ ಉಲ್ಲೇಖ-(1) ಮತ್ತು (2)ರಂತೆ ಸಲ್ಲಿಸಿರುವ ವರದಿಯನ್ನು ಪರಿಗಣಿಸಿ, ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ ದಿನಾಂಕ: 06-03-2024ರ ಅಪರಾಹ್ನದಿಂದ ಅನ್ವಯವಾಗುವಂತೆ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ, ಮಾತೃ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

**ಷರತ್ತುಗಳು :-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ .
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ .
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ , ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ .
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ .
5. ವಾಕಿ ಟಾಕಿ , ಮೊಬೈಲ್ ಫೋನ್ , ಸಿಮ್ ಕಾರ್ಡ್ , ಹೆಲ್ಮಾರ್ಡ್ , ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ .

ಮೇಲ್ಕಂಡ ಆದೇಶದನ್ವಯ ಹಾಗೂ ಮಾನ್ಯ ಮುಖ್ಯ ಆಯುಕ್ತರು ರವರ ಉಲ್ಲೇಖ-(3)ರ ಸುತ್ತೋಲೆಯನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

SDA 06/03/24

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

6/3
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

5/3/2024 5/3/24 5/3

1531
06/03/2024

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮಾನ್ಯ ವಲಯ ಆಯುಕ್ತರು (ದಕ್ಷಿಣ) / ಜಂಟಿ ಆಯುಕ್ತರು (ದಕ್ಷಿಣ) ವಲಯ ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ದಕ್ಷಿಣ) / ಕಾ.ಪಾ.ಅ (ಪದ್ಮನಾಭನಗರ) ವಿಭಾಗ ರವರಿಗೆ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
: ಸ.ಕಾ.ನಿ.ಅ (ಬನಶಂಕರಿ) ಉಪ ವಿಭಾಗ ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು / ಉ.ನಿ (ಹಣಕಾಸು-ದಕ್ಷಿಣ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.